File No. DPARAR/5/ASAP/2020-DPARAr_DS_EST-DPAR AR SEC-Part(1)

# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:**-ಕರ್ನಾಟಕ ಆಡಳಿತ ಸುಧಾರಣಾ ಆಯೋಗ-2 ಗೆ ಸಲಹೆಗಾರರ ಹುದ್ದೆ ಸೃಜಿಸುವ ಬಗ್ಗೆ.

**ಓದಲಾಗಿದೆ:** 1. ಸರ್ಕಾರದ ಆದೇಶ ಸಂಖ್ಯೆ. ಸಿಆಸುಇ-ಆಸು 05 ಆಸಪ 2020, ಬೆಂಗಳೂರು, ದಿನಾಂಕ: 07.01.2021.

2. ಟಿಪ್ಪಣಿ ಸಂಖ್ಯೆ. ಆಇ 10 ವೆಚ್ಚ- 12 / 2021 ದಿನಾಂಕ: 06.01.2021.

3. ಟಿಪ್ಪಣಿ ಸಂಖ್ಯೆ. ಆಇ 40 ಎಫ್.ಆರ್.ಸಿ. 2021(ಇ) ದಿನಾಂಕ: 22.01.2021.

4. ಟಿಪ್ಪಣಿ ಸಂಖ್ಯೆ. ಸಿಆಸುಇ 02 ಅಆ (ಆಸು) 2021 ದಿನಾಂಕ:19.01.2021.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ ಪ್ರಸ್ತುತ ಅಸ್ತಿತ್ವದಲ್ಲಿರುವ ಆಡಳಿತ ಮತ್ತು ಆಡಳಿತ ವ್ಯವಸ್ಥೆಗಳನ್ನು ಮತ್ತೊಮ್ಮೆ ಸಮಗ್ರವಾಗಿ ಮೌಲ್ಯಮಾಪನ ಮಾಡುವ ಅವಶ್ಯಕತೆ ಬಂದಿದೆ. 21ನೇ ಶತಮಾನದ ಮುಂಬರುವ ದಶಕಗಳಲ್ಲಿ ಸೂಕ್ತವಾದ ಹೊಸ ಆಡಳಿತ ಮತ್ತು ಆಡಳಿತ ವ್ಯವಸ್ಥೆಯನ್ನು ರಚಿಸಲು ಹೊಸ ಬದಲಾವಣೆಗಳನ್ನು ಮತ್ತು ಪರಿವರ್ತನೆಗಳನ್ನು ಶಿಫಾರಸ್ಸು ಮಾಡಲು ಸಮಿತಿಯನ್ನು ರಚಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ಮತ್ತು (3)ರ ಆರ್ಥಿಕ ಇಲಾಖೆ ಟಿಪ್ಪಣಿಯಲ್ಲಿ ಕರ್ನಾಟಕ ಆಡಳಿತ ಸುಧಾರಣಾ ಆಯೋಗ-2 ರಚನೆ ಮತ್ತು ಆಯೋಗಕ್ಕೆ ಪೂರಕವಾಗಿ 14 ಹುದ್ದೆಗಳನ್ನು ಸೃಜಿಸಲು ಸಹಮತಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4), ದಿನಾಂಕ: 19.01.2021ರ ಟಿಪ್ಪಣಿಯಲ್ಲಿ ಅಧ್ಯಕ್ಷರು, ಆಯೋಗದ ಕೆಲಸ ಕಾರ್ಯಗಳಿಗೆ ನೆರವಾಗಲು ಶ್ರೀ ಪ್ರಸನ್ನ ಕುಮಾರ್, ಭಾ.ಆ.ಸೇ.,(ನಿವೃತ್ತ) ಇವರನ್ನು ಸಲಹೆಗಾರರನ್ನಾಗಿ ನೇಮಿಸಿಕೊಳ್ಳಲು ಅನುಮೋದನೆ ಕೋರಿದ್ದಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ. ಸಿಆಸುಇ(ಆಸು) 05 ಆಸಪ 2020,**
**ಬೆಂಗಳೂರು, ದಿನಾಂಕ: 30-01-2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಆಡಳಿತ ಸುಧಾರಣಾ ಆಯೋಗ-2 ರ ಕೆಲಸ ಕಾರ್ಯಗಳಿಗೆ ನೆರವಾಗಲು ಶ್ರೀ ಪ್ರಸನ್ನ ಕುಮಾರ್, ಭಾ.ಆ.ಸೇ.,(ನಿವೃತ್ತ) ಇವರನ್ನು ಸಲಹೆಗಾರರನ್ನಾಗಿ ತಾತ್ಕಾಲಿಕವಾಗಿ ಎರಡು ವರ್ಷಗಳ ಅವಧಿಗೆ ಅಥವಾ ಮುಂದಿನ ಆದೇಶದ ವರೆಗೆ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲು ಸರ್ಕಾರವು ಮಂಜೂರಾತಿ ನೀಡಿದೆ.

--2

ಈ ಆದೇಶವನ್ನು ಟಿಪ್ಪಣಿ ಸಂಖ್ಯೆ. ಆಇ 10 ವೆಚ್ಚ-12/2021 ದಿನಾಂಕ: 06.01.2021ರಲ್ಲಿ ಆರ್ಥಿಕ ಇಲಾಖೆಯು ನೀಡಿದ ಸಹಮತಿಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ಎಸ್. ರವಿಕುಮಾರ್)
ಸರ್ಕಾರದ ಉಪ ಕಾರ್ಯದರ್ಶಿ(ಪ್ರಭಾರ),
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ).

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (E&RSA) , ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಲೆಕ್ಕಪತ್ರ-1 ಮತ್ತು 2) , ಕರ್ನಾಟಕ, ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
6. ಅಧ್ಯಕ್ಷರು, ಕರ್ನಾಟಕ ಆಡಳಿತ ಸುಧಾರಣಾ ಆಯೋಗ-2, ಬೆಂಗಳೂರು.
7. ಸಲಹೆಗಾರರು, ಕರ್ನಾಟಕ ಆಡಳಿತ ಸುಧಾರಣಾ ಆಯೋಗ-2, ಬೆಂಗಳೂರು.
8. ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಹಾಗೂ ಆಯೋಗದ ಕಾರ್ಯದರ್ಶಿ, ಕರ್ನಾಟಕ ಆಡಳಿತ ಸುಧಾರಣಾ ಆಯೋಗ-2, ಬೆಂಗಳೂರು.
9. ಪ್ರಧಾನ ನಿರ್ದೇಶಕರು, ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆ, ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ, ಸಿ.ಆ.ಸು.ಇಲಾಖೆ (ಸೇವೆಗಳು)/ (ಲೆಕ್ಕಪತ್ರ 1 ಮತ್ತು 2)/ (ಕಾರ್ಯಕಾರಿ).
11. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ ವಿಧಾನ ಮಂಡಲದ ಗ್ರಂಥಾಲಯ.
12. ವಾರಪತ್ರ/ಶಾಖೆಯ ರಕ್ಷಾ ಕಡತ.